ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.

ಸಿಸಿ ನಂಬರ್ **1014/2023**

| | | | |
|---|---|---|---|
| ಸಾಕ್ಷಿಯ ಹೆಸರು | : ಉಮೇಶ್ | ಸಿ.ಡಬ್ಲ್ಯು 2 |
| ತಂದೆಯ ಹೆಸರು | : ಮಡಿವಾಳಪ್ಪ | ಪಿ.ಡಬ್ಲ್ಯು 1 |
| ವಯಸ್ಸು | : 47 ವರ್ಷ | |
| ಉದ್ಯೋಗ | : ಮುಖ್ಯ ಪೇದೆ | |
| ವಾಸ ಸ್ಥಳ | : ಅಜ್ಜಂಪುರ | |

ದಿನಾಂಕಃ**03-12-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ನಾನು 2017 ರಿಂದ 2023 ಜೂನ್ ತಿಂಗಳವರೆಗೆ ತರೀಕೆರೆಯಲ್ಲಿ ಮುಖ್ಯ ಪೇದೆ ಎಂದು ಕೆಲಸ ಮಾಡಿದ್ದೇನೆ.

ಈ ಪ್ರಕರಣದಲ್ಲಿ ದಿಃ27-02-2023 ರಂದು ಸಂಜೆ 7-00 ಗಂಟೆಯ ಸುಮಾರಿಗೆ ನಾನು ಠಾಣಾ ಪ್ರಭಾರದಲ್ಲಿ ಇದ್ದಾಗ ಚಾಸಾ-1 ರವರು ನೀಡಿದ ಲಿಖಿತ ದೂರು, ಅಮಾನತ್ತುಪಂಚನಾಮೆ, ಮುದ್ದೆಮಾಲು ಮತ್ತು ಆರೋಪಿಯನ್ನು ಸ್ವೀಕರಿಸಿ ಪ್ರ.ವ.ವರದಿಯನ್ನು ತಯಾರಿಸಿ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿದ್ದೇನೆ. ದಸ್ತಗಿರಿ ಕ್ರಮವನ್ನು ಅನುಸರಿಸಿ ಆರೋಪಿಯನ್ನು ಸೂಕ್ತ ನೋಟೀಸು ನೀಡಿ ಬಿಡುಗಡೆ ಮಾಡಿದ್ದೇನೆ. ಅದೇ ದಿನ ವಶಪಡಿಸಿಕೊಂಡ ಮುದ್ದೆಮಾಲು ಕುರಿತು ಪಿ.ಎಫ್ ವರದಿ ಸಲ್ಲಿಸಿದೇನೆ. ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-8 ರವರಿಗೆ ವಹಿಸಿದ್ದೇನೆ. ವರದಿಯನ್ನು ನಿ.ಪಿ -1, ಸಾಕ್ಷಿಯ ಸಹಿಯನ್ನು ನಿ.ಪಿ-1(ಎ) ಎಂದು, ಮುದ್ದೆಮಾಲನ್ನು ಮು.ಮಾ-1 ಎಂದು , ಪ್ರ.ವರದಿಯನ್ನು ನಿ.ಪಿ-2 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ

ನನ್ನ ಮುಂದೆ ಚಾಸಾ-1 ರವರು ಯಾವುದೇ ವರದಿ ಸಲ್ಲಿಸಿಲ್ಲ ಮತ್ತು ಆರೋಪಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಚಾಸಾ-1 ನನ್ನ ಮೇಲಾಧಿಕಾರಿ ಎಂದರೆ ಸರಿ, ಅವರ ಮಾತು ಕೇಳಿ ಸುಳ್ಳು ಪ್ರ.ವ.ವರದಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ **:** ಇಲ್ಲಃ

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

ಓ ಹೇ ಕೇ ಸ ಇ ಎ ಒ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ

ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.